ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: 　　　ದಿನಾಂಕ : DATE: 21/12/19

# ಸಾಹಿತಿ ಪ್ರೊ.ಎಂ.ರಾಮಚಂದ್ರ ನಿಧನ

ಕಾರ್ಕಳ: ಪ್ರಾಧ್ಯಾಪಕ, ಸಾಹಿತಿ ಪ್ರೊ. ಎಂ.ರಾಮಚಂದ್ರ(80) ಹೃದಯಾಘಾತದಿಂದ ಶುಕ್ರವಾರ ನಿಧನರಾದರು. ಪತ್ನಿ ಮತ್ತು ಇಬ್ಬರು ಪುತ್ರರನ್ನು ಅವರು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸಂಜೆ ನೆರವೇರಿತು. 1939ರಲ್ಲಿ ಜನಿಸಿದ್ದ ಸುಳ್ಯ ಮೂಲದ ರಾಮಚಂದ್ರ, 1962ರಿಂದ ಕಾರ್ಕಳ ಭುವನೇಂದ್ರ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾಗಿದ್ದರು.1997ರಲ್ಲಿ ನಿವೃತ್ತಿ ಬಳಿಕ ಕಾರ್ಕಳ ಸಾಹಿತ್ಯ ಸಂಘ ಸ್ಥಾಪಿಸಿದ್ದರು. ಬಾಡದ ಹೂಗಳು, ನೆನಪಿನ ಸುರಗಿ, ಚಿತ್ರ ಚರಿತ್ರೆ



ಇವರ ಪ್ರಮುಖ ಪುಸ್ತಕಗಳು. ಸೇಡಿಯಾಪು ಕೃಷ್ಣಭಟ್ಟರ ಪತ್ರಾವಳಿ ಸಂಪಾದಿತ ಕೃತಿ. ಇವರ 'ರಸಾಯನ' ಕೃತಿಯ ಭಾಗ ಮಂಗಳೂರು ವಿಶ್ವವಿದ್ಯಾಲಯದಲ್ಲಿ ಪಠ್ಯವಾಗಿತ್ತು. ದ.ಕ. ಜಿಲ್ಲಾ ಪ್ರಥಮ ಸಾಹಿತ್ಯ ಸಮ್ಮೇಳನ ಮತ್ತು 9ನೇ ಸಮ್ಮೇಳನ ಕಾರ್ಯದರ್ಶಿಯಾಗಿ, ಧರ್ಮಸ್ಥಳ ಸರ್ವಧರ್ಮ ಮತ್ತು ಸಾಹಿತ್ಯ ಸಮ್ಮೇಳನ ಸ್ವಾಗತ ಸಮಿತಿ ಸದಸ್ಯರಾಗಿದ್ದರು. ಮಣಿಪಾಲ ಅಕಾಡೆಮಿ ಸುವರ್ಣ ಮಹೋತ್ಸವ ಪುರಸ್ಕಾರ, ಪೇಜಾವರ ಮಠದ ರಾಮಸೇವಾ ವಿಠಲ ಪ್ರಶಸ್ತಿ, ಶೃಂಗೇರಿ ಶ್ರೀಗಳಿಂದ ಸತ್ಕಾರ, ಎಸ್.ವಿ.ಪರಮೇಶ್ವರ ಭಟ್ ಪ್ರಶಸ್ತಿ, ಆಳ್ವಾಸ್ ನುಡಿಸಿರಿ, ಏರ್ಯ ಬೀಡು ಹೀಗೆ ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದರು. ಡಾ. ಜಿ.ಪಿ.ರಾಜರತ್ನಂ ಸಾಹಿತ್ಯ ಪರಿಚಾರಕ ಪ್ರಶಸ್ತಿಗೆ ಆಯ್ಕೆಯಾಗಿರುವ ಇವರಿಗೆ 2020ರ ಜ.8ರಂದು ಬೆಂಗಳೂರಿನಲ್ಲಿ ಪ್ರಶಸ್ತಿ ಪ್ರದಾನ ಆಗಬೇಕಿತ್ತು.